ಎಲ್.ಎ.ಸಿ.ಸಂಖ್ಯೆ: 53/2017

ಪಿ ಡಬ್ಲೂ: 1

**ದಿಃ *17-10-2025* ರ ಆದೇಶದ ಮೇರೆಗೆ ಸಾಕ್ಷಿಯನ್ನು ಪುನಃ ಮುಖ್ಯ ವಿಚಾರಣೆಗೆ ದಿಃ *17-10-2025* ರಂದು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರವಾಗಿ ಶ್ರೀ ಬಿ.ಪಿ.ಆರ್. ವಕೀಲರಿಂದಃ-

13. ದಿಃ *04-10-2016* ರಂದು ತೋಟಗಾರಿಕೆ ಇಲಾಖೆಯವರು ನೀಡಿದ ಮಾಹಿತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***10*** ಎಂದು, ದಿಃ *06-08-2025* ರಂದು ತರೀಕೆರೆ ಎ.ಪಿ.ಎಂ.ಸಿ. ಕಾರ್ಯದರ್ಶಿರವರು ನೀಡಿರುವ ಬೆಳೆಗಳ ಧಾರಣೆ ಮಾಹಿತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***11*** ಎಂದು, ತರೀಕೆರೆ ಎ.ಪಿ.ಎಂ.ಸಿ. ಕಾರ್ಯದರ್ಶಿರವರು ನೀಡಿರುವ *2011-2012* ರಿಂದ *2021-2022* ನೇ ಸಾಲಿನ ಕೃಷಿ ಉತ್ಪನ್ನಗಳ ಮಾರುಕಟ್ಟೆ ವಿವರದ ತಃಖ್ತೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***12*** ಎಂದು, *2010-2011* ರಿಂದ ಪ್ರಸ್ತುತ ಸಾಲಿನವರೆಗಿನ ಚಾಕೋನಹಳ್ಳಿ ಗ್ರಾಮಕ್ಕೆ ಸಂಬಂಧಿಸಿದ ತರೀಕೆರೆ ಉಪ ನೋಂದಣಾಧಿಕಾರಿಯವರು ನೀಡಿರುವ ಪರಿಷ್ಕೃತ ದರಗಳ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.***13*** ಎಂದು ಮತ್ತು *2010-2011* ರಿಂದ ಪ್ರಸ್ತುತ ಸಾಲಿನವರೆಗಿನ ಹಳಿಯೂರು ಗ್ರಾಮಕ್ಕೆ ಸಂಬಂಧಿಸಿದ ತರೀಕೆರೆ ಉಪ ನೋಂದಣಾಧಿಕಾರಿಯವರು ನೀಡಿರುವ ಪರಿಷ್ಕೃತ ದರಗಳ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.***14*** ಎಂದು ಗುರುತಿಸಲಾಯಿತು.

**(ಪಾಟೀ ಸವಾಲುಃ**

**(ಎದುರುದಾರರ ಪರ ವಕೀಲರ ಕೋರಿಕೆ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಾಯಿತು)**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ